# ಕೆ ಎಲ್ ಎಸ್ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ, ಹಳಿಯಾಳ

## ಕಲ್ಪವೃಕ್ಷ ಕನ್ನಡ ಸಂಘ

**ಪತ್ರ ಸಂಖ್ಯೆ:** 7 ದಿನಾಂಕ: 16-10-2023

## ವರದಿ

68ನೇ ಕರ್ನಾಟಕ ರಾಜ್ಯೋತ್ಸವ ಹಾಗೂ ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣವಾಗಿ ೫೦ ವರ್ಷ ಪೂರ್ಣಗೊಳ್ಳಲಿರುವ ಸುವರ್ಣ ಮಹೋತ್ಸವದ **"ಕರ್ನಾಟಕ ಸಂಭ್ರಮ-೫೦"**ರ ಸುಸಂದರ್ಭದಲ್ಲಿ ಕೆ.ಎಲ್.ಎಸ್. ,ವಿಡಿಐಟಿಯ "ಕಲ್ಪವೃಕ್ಷ ಕನ್ನಡ ಸಂಘ"ದ ವತಿಯಿಂದ **"ಸಂಘ ಒಂದು - ಸದಸ್ಯತ್ವನೂರು"**ಎಂಬ ಶೀರ್ಷಿಕೆಯಡಿ ಕನ್ನಡಿಗರ ಅಸ್ಮಿತೆಯ ಪ್ರತೀಕವಾದ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಅಭಿಯಾನವನ್ನು ದಿನಾಂಕ: 09-10-2023 ರಂದು ಮಧ್ಯಾಹ್ನ 2:00 ಗಂಟೆಗೆ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಆಗಮಿಸಿದ್ದ ಕನ್ನಡ ಸಾಹಿತ್ಯ ಪರಿಷತ್ ಹಳಿಯಾಳ ತಾಲೂಕ ಘಟಕದ ಅಧ್ಯಕ್ಷರಾದ ಶ್ರೀಮತಿ. ಸುಮಂಗಲ ಅಂಗಡಿ ಕನ್ನಡ ನಾಡು-ನುಡಿ ಉಳಿಸಿ ಬೆಳೆಸುವುದು ಕನ್ನಡಿಗರಾದ ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು. ಆಧುನಿಕ ತಂತ್ರಜ್ಞಾನದ ಕನ್ನಡ ಪುಸ್ತಕ ಗಳನ್ನು ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲೆ ವಿದ್ಯಾರ್ಥಿ ಗಳಿಗೆ ಉಚಿತವಾಗಿ ನೀಡುತ್ತಿರುವ ವಿ ಡಿ ಐ ಟಿ ಕಾರ್ಯವನ್ನು ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ವಿ. ಎ. ಕುಲಕರ್ಣಿ ಕನ್ನಡವ ಉಳಿಸಿ ಬೆಳೆಸಲು ಮಹಾವಿದ್ಯಾಲಯವು ಅನೇಕ ಉಪಕ್ರಮಗಳನ್ನು ಹಮ್ಮಿಕೊಂಡಿದ್ದು, ಆಕಾಶವಾಣಿ ಧಾರವಾಡ ಕೇಂದ್ರದ ಮೂಲಕ " ಜನಸಾಮಾನ್ಯರಿಗಾಗಿ ತಂತ್ರಜ್ಞಾನ " ಮತ್ತು " ಕರುಣಾಳು ಬಾ ಬೆಳಕೇ " ಕಾರ್ಯಕ್ರಮ ಗಳನ್ನು ಪ್ರಾಯೋಜಿಸಿದೆ ಎಂದು ತಿಳಿಸಿದರು. ಈ ಅಭಿಯಾನದ ಮೂಲಕ ರಾಜ್ಯೋತ್ಸವದ ಮೊದಲು 100 ಸದಸ್ಯರನ್ನು ನೋಂದಾಯಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಕಲ್ಪವೃಕ್ಷ ಕನ್ನಡ ಸಂಘದ ಕಾರ್ಯದರ್ಶಿ ಪ್ರೊ. ರೋಹಿಣಿ ಕಲ್ಲೂರ ಸ್ವಾಗತಿಸಿದರು. ಶ್ರೀ ಶಾಂತಾರಾಮ್ ಚಿಬ್ಬುಲ್ಕರ್, ಪ್ರೊ ಎಸ್ ಡಿ ಕುಲಕರ್ಣಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.ಕುಮಾರಿ. ಐಶ್ವರ್ಯ ಕ್ಷಿರಸಾಗರ್ ಹಾಗೂ ಕು. ಹರಿವರ್ಷ ಜೋಶಿ ನಿರೂಪಿಸಿದರು. ಮಹಾವಿದ್ಯಾಲಯದ ಬೋದಕ ಬೋಧಕೇತರ ಸಿಬ್ಬಂದಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.






# ಕನ್ನಡ ಸಾಹಿತ್ಯ ಪರಿಷತ್ ಸದಸ್ಯತ್ವ ಅಭಿಯಾನ

**ಶಿರಸಿ ಸಮಾಚಾರ ⏭ ಹಳಿಯಾಳ:** ಪಟ್ಟಣದ ಕೆಎಲ್ಎಸ್ ವಿಡಿಐಟಿ ಮತ್ತು ಕೆಎಲ್ಎಸ್ ಬಿಸಿಎ ಮಹಾ ವಿದ್ಯಾಲಯದಲ್ಲಿ "ಸಂಘ ಒಂದು – ಸದಸ್ಯತ್ವ ನೂರು" ಎಂಬ ಶೀರ್ಷಿಕೆಯಡಿ ಕನ್ನಡಿಗರ ಅಭಿಮಾನದ ಸಂಸ್ಥೆ, ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಅಭಿಯಾನವನ್ನು



ಸೋಮವಾರ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಆಗಮಿಸಿದ್ದ ಕನ್ನಡ ಸಾಹಿತ್ಯ ಪರಿಷತ್ ಹಳಿಯಾಳ ತಾಲೂಕ ಘಟಕದ ಅಧ್ಯಕ್ಷೆ ಸುಮಂಗಲ ಅಂಗಡಿ ಅವರು ಕನ್ನಡ ನಾಡು–ನುಡಿ ಉಳಿಸಿ ಬೆಳೆಸುವುದು ಕನ್ನಡಿಗರಾದ ನಮ್ಮೆಲ್ಲರ ಕರ್ತವ್ಯ ಎಂದು ಹೇಳಿದರು.

ಆಧುನಿಕ ತಂತ್ರಜ್ಞಾನದ ಕನ್ನಡ ಪುಸ್ತಕ ಗಳನ್ನು ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲೆ ವಿದ್ಯಾರ್ಥಿ ಗಳಿಗೆ ಉಚಿತವಾಗಿ ನೀಡುತ್ತಿರುವ ವಿಡಿಐಟಿ ಕಾರ್ಯವನ್ನು ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ, ಕನ್ನಡವ ಉಳಿಸಿ ಬೆಳೆಸಲು ಮಹಾವಿದ್ಯಾಲಯವು ಅನೇಕ ಉಪಕ್ರಮಗಳನ್ನು ಹಮ್ಮಿಕೊಂಡಿದ್ದು, ಆಕಾಶವಾಣಿ ಧಾರವಾಡ ಕೇಂದ್ರದ ಮೂಲಕ " ಜನಸಾಮಾನ್ಯರಿಗಾಗಿ ತಂತ್ರಜ್ಞಾನ" ಮತ್ತು "ಕರುಣಾಳು ಬಾ ಬೆಳಕೇ" ಕಾರ್ಯಕ್ರಮಗಳನ್ನು ಪ್ರಾಯೋಜಿಸಿದೆ ಎಂದು ತಿಳಿಸಿದರು.

ಈ ಅಭಿಯಾನದ ಮೂಲಕ ರಾಜ್ಯೋತ್ಸವದ ಮೊದಲು 100 ಸದಸ್ಯರನ್ನು ನೋಂದಾಯಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಕಲ್ಪವೃಕ್ಷ ಕನ್ನಡ ಸಂಘದ ಕಾರ್ಯದರ್ಶಿ ಪ್ರೊ. ರೋಹಿಣಿ ಕಲ್ಲೂರ ಸ್ವಾಗತಿಸಿದರು. ಶಾಂತಾರಾಮ್ ಚಿಬ್ಬುಲ್ಕರ್, ಪ್ರೊ ಎಸ್ ಡಿ ಕುಲಕರ್ಣಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ವಿದ್ಯಾರ್ಥಿಗಳಾದ ಐಶ್ವರ್ಯ ಕ್ಷಿರಸಾಗರ ಮತ್ತು ಹರಿವರ್ಷ ಜೋಶಿ ಕಾರ್ಯಕ್ರಮ ನಿರೂಪಿಸಿದರು. ಮಹಾವಿದ್ಯಾಲಯದ ಬೋದಕ ಬೋಧಕೇತರ ಸಿಬ್ಬಂದಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ರಾಜ್ಯೋತ್ಸವಕ್ಕೆ ಮೊದಲು 100 ಸದಸ್ಯರ ನೊಂದಣಿ ಗುರಿ

# ಕಸಾಪ ಸದಸ್ಯತ್ವ ಅಭಿಯಾನಕ್ಕೆ ಚಾಲನೆ

ಪ್ರಜಾವಾಣಿ ವಾರ್ತೆ

**ಹಳಿಯಾಳ:** ಕನ್ನಡ ನಾಡು- ನುಡಿ ಉಳಿಸಿ ಬೆಳೆಸುವುದು ಕನ್ನಡಿಗರಾದ ನಮ್ಮೆಲ್ಲರ ಕರ್ತವ್ಯ ಎಂದು ಕನ್ನಡ ಸಾಹಿತ್ಯ ಪರಿಷತ್ ಹಳಿಯಾಳ ತಾಲ್ಲೂಕು ಘಟಕದ ಅಧ್ಯಕ್ಷರಾದ ಸುಮಂಗಲಾ ಅಂಗಡಿ ಹೇಳಿದರು.

ಇಲ್ಲಿನ ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯದಲ್ಲಿ 'ಸಂಘ ಒಂದು- ಸದಸ್ಯತ್ವ ನೂರು' ಎಂಬ ಶೀರ್ಷಿಕೆಯಡಿ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.

ಆಧುನಿಕ ತಂತ್ರಜ್ಞಾನದ ಕನ್ನಡ ಪುಸ್ತಕಗಳನ್ನು ಪ್ರಾಥಮಿಕ ಮತ್ತು ಮಾಧ್ಯಮಿಕ ಶಾಲೆ ವಿದ್ಯಾರ್ಥಿಗಳಿಗೆ ಉಚಿತವಾಗಿ ನೀಡುತ್ತಿರುವ ವಿಡಿಐಟಿ ಕಾರ್ಯ ಶ್ಲಾಘನೀಯ ಎಂದರು.



ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯದಲ್ಲಿ ನಡೆದ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಅಭಿಯಾನದಲ್ಲಿ ಪಾಲ್ಗೊಂಡ ವಿದ್ಯಾಲಯದ ಸಿಬ್ಬಂದಿ

ಪ್ರಾಚಾರ್ಯ ಡಾ. ವಿ.ಎ.ಕುಲಕರ್ಣಿ ಮಾತನಾಡಿ, ಕನ್ನಡ ಉಳಿಸಿ ಬೆಳೆಸಲು ಮಹಾವಿದ್ಯಾಲಯವು ಅನೇಕ ಉಪಕ್ರಮಗಳನ್ನು ಹಮ್ಮಿಕೊಂಡಿದ್ದು, ಆಕಾಶವಾಣಿ ಧಾರವಾಡ ಕೇಂದ್ರದ ಮೂಲಕ 'ಜನಸಾಮಾನ್ಯರಿಗಾಗಿ ತಂತ್ರಜ್ಞಾನ' ಮತ್ತು 'ಕರುಣಾಳು ಬಾ ಬೆಳಕೇ' ಕಾರ್ಯಕ್ರಮಗಳನ್ನು ಪ್ರಾಯೋಜಿಸಿದೆ ಎಂದು ತಿಳಿಸಿದರು.

ಈ ಅಭಿಯಾನದ ಮೂಲಕ ರಾಜ್ಯೋತ್ಸವದ ಮೊದಲು 100 ಸದಸ್ಯರನ್ನು ನೊಂದಾಯಿಸುವ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಕಲ್ಪವೃಕ್ಷ ಕನ್ನಡ ಸಂಘದ ಕಾರ್ಯದರ್ಶಿ ಪ್ರೊ. ರೋಹಿಣಿ ಕಲ್ಲೂರ, ಶಾಂತಾರಾಮ್ ಚಿಬ್ಬುಲ್ಕರ್, ಪ್ರೊ ಎಸ್. ಡಿ ಕುಲಕರ್ಣಿ ಮಾತನಾಡಿದರು.

ವಿದ್ಯಾರ್ಥಿಗಳಾದ ಐಶ್ವರ್ಯ ಕ್ಷೀರಸಾಗರ ಮತ್ತು ಹರಿವರ್ಷ ಜೋಶಿ ಕಾರ್ಯಕ್ರಮ ನಿರೂಪಿಸಿದರು. ಮಹಾವಿದ್ಯಾಲಯದ ಬೋದಕ ಬೋಧಕೇತರ ಸಿಬ್ಬಂದಿ ಇದ್ದರು.


GPS Map Camera
Haliyal, Karnataka, India
8QF4+432, Haliyal, Karnataka 581329, India
Lat 15.322739°
Long 74.755134°
09/10/23 03:30 PM GMT +05:30
Google